## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : COVID-19 ವೈರಾಣು ಹರಡುವಿಕೆಯನ್ನು ತಡೆಯಲು ಪೊಲೀಸ್ ಅಧಿಕಾರಿ / ಸಿಬ್ಬಂದಿಗಳಿಗೆ ಅಗತ್ಯ ರಕ್ಷಣಾ ಸಾಮಗ್ರಿಗಳನ್ನು ಖರೀದಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ : ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ಬೆಂಗಳೂರು ಇವರ ಪತ್ರ ಸಂಖ್ಯೆ: ಸಂಗ್ರಹ-1(3)/53/ 2019-20 ದಿನಾಂಕ 30.03.2020.

* * * *

**ಪ್ರಸ್ತಾವನೆ:**

COVID-19 ವೈರಾಣು ಹರಡುವುದನ್ನು ಪರಿಣಾಮಕಾರಿಯಾಗಿ ತಡೆಯಲು ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳು ಪ್ರತಿನಿತ್ಯ ಬಂದೋಬಸ್ತ್ ಕರ್ತವ್ಯದಲ್ಲಿ ನಿರತರಾಗಿದ್ದು, ಈ ಸಮಯದಲ್ಲಿ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಯಾವುದೇ ರೀತಿಯ ಸೋಂಕು ತಗುಲದಂತೆ ಮುನ್ನೆಚ್ಚರಿಕೆ ವಹಿಸಲು ಅವರುಗಳಿಗೆ ಅವಶ್ಯ ರಕ್ಷಣಾ ಸಾಮಗ್ರಿಗಳಾದ Mask, Sanitizer, Hand Gloves and Protect suit ಗಳನ್ನು ಒದಗಿಸುವಂತೆ ಅಥವಾ ರೂ.10.00 ಕೋಟಿಗಳ ಅನುದಾನವನ್ನು ಪೊಲೀಸ್ ಇಲಾಖೆಗೆ ಬಿಡುಗಡೆ ಮಾಡುವಂತೆ ಮೇಲೆ ಓದಲಾದ ಪ್ರಸ್ತಾವನೆಯಲ್ಲಿ ಕೋರಲಾಗಿದೆ.

ಕೇಂದ್ರ ಸರ್ಕಾರವು COVID-19 ತಡೆಗಟ್ಟಲು ಹೊರಡಿಸಿರುವ ಮಾರ್ಗಸೂಚಿಯಲ್ಲಿ COVID-19 ತಡೆಗಟ್ಟುವ ಕರ್ತವ್ಯದಲ್ಲಿ ತೊಡಗುವ ಮುನಿಸಿಪಾಲ್, ಪೊಲೀಸ್ ಮತ್ತು ಅಗ್ನಿ ಶಾಮಕ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳ ರಕ್ಷಣೆಗೆ ಅಗತ್ಯವಿರುವ ರಕ್ಷಣಾ ಸಾಮಗ್ರಿಗಳನ್ನು ಖರೀದಿಸಲು ತಗಲುವ ವೆಚ್ಚವನ್ನು SDRF ಅಡಿ ಭರಿಸಲು ಅವಕಾಶ ಕಲ್ಪಿಸಲಾಗಿದೆ.

ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು ಇವರ ಪ್ರಸ್ತಾವನೆಯನ್ನು ಪರಿಶೀಲಿಸಿದ ಸರ್ಕಾರವು ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಕಂಇ 193 ಟಿಎನ್‌ಆರ್ 2020, ಬೆಂಗಳೂರು, ದಿನಾಂಕ 16.04.2020**

COVID-19 ವೈರಾಣು ಹರಡುವುದನ್ನು ತಡೆಗಟ್ಟಲು ಬಂದೋಬಸ್ತ್ ಕರ್ತವ್ಯದಲ್ಲಿ ತೊಡಗಿರುವ ಪೊಲೀಸ್ ಇಲಾಖೆಯ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ಯಾವುದೇ ರೀತಿಯ ಸೋಂಕು ತಗುಲದಂತೆ ಅಗತ್ಯ ರಕ್ಷಣಾ ಸಾಮಗ್ರಿಗಳನ್ನು SDRF ಮಾರ್ಗಸೂಚಿಗಳನ್ವಯ ಖರೀದಿಸಲು ಗೃಹ ಇಲಾಖೆಗೆ ರೂ.5.00 ಕೋಟಿ (ಐದು ಕೋಟಿ ರೂಪಾಯಿ ಮಾತ್ರ) ಗಳನ್ನು ಈ ಕೆಳಕಂಡ ಷರತ್ತುಗಳಿಗೆ ಒಳಪಟ್ಟು ಬಿಡುಗಡೆ ಮಾಡಿ ಆದೇಶಿಸಿದೆ.

**ಷರತ್ತುಗಳು:**

1) ಕೇಂದ್ರೀಯ ಗೃಹ ಮಂತ್ರಾಲಯದ ದಿನಾಂಕ 14.03.2020 ರ ಮಾರ್ಗಸೂಚಿಯ ಐಟಂ ನಂ.2(ಬಿ) (cost of personal protection equipment for health care, municipal, *police* and fire authorities) ರಲ್ಲಿ ಸೂಚಿಸಿದ್ದು, SDRF ಮಾರ್ಗಸೂಚಿಯನ್ವಯ ಅಗತ್ಯ ರಕ್ಷಣಾ ಸಾಮಗ್ರಿಗಳನ್ನು ಖರೀದಿಸುವುದು.

2) ಅನುದಾನ ಬಳಕೆಯ ಕುರಿತು ಅನುದಾನ ಬಳಕೆ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸುವುದು.

3) ಅನುದಾನ ಬಳಕೆಯಲ್ಲಿ ಯಾವುದೇ ಲೋಪದೋಷ ಉಂಟಾಗದಂತೆ ಎಚ್ಚರ ವಹಿಸುವುದು.

ಈ ಅನುದಾನವನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ) ಇವರ ಪರವಾಗಿ ಸರ್ಕಾರದ ಅಧೀನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿಪತ್ತು ನಿರ್ವಹಣೆ ಮತ್ತು ಸೇವೆಗಳು-3) ಇವರು ಲೆಕ್ಕ ಶೀರ್ಷಿಕೆ 2245-80-102-0-01-059 ಅಡಿಯಲ್ಲಿ ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು ಇವರ ಡ್ರಾಯಿಂಗ್ ಕೋಡ್‌ಗೆ ಬಿಡುಗಡೆ ಮಾಡಿದೆ. ಡೈರೆಕ್ಟರ್ ಜನರಲ್ ಮತ್ತು ಇನ್ಸ್‌ಪೆಕ್ಟರ್ ಜನರಲ್ ಆಫ್ ಪೊಲೀಸ್ ಇವರು ಈ ಅನುದಾನವನ್ನು ಕಾರ್ಯಕ್ರಮ ಅನುಷ್ಠಾನಗೊಳಿಸಲು ಭರಿಸುವುದು.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ ಎಸಿಎಸ್/ಆಇ/1167/2020 ದಿನಾಂಕ 13.04.2020 ರಲ್ಲಿ ಹಾಗೂ ಟಿಪ್ಪಣಿ ಸಂಖ್ಯೆ ಎಸಿಎಸ್/ಆಇ/1179/2020 ದಿನಾಂಕ 16.04.2020 ರಲ್ಲಿ ನೀಡಿರುವ ಸಹಮತದ ಅನುಸಾರ ಹೊರಡಿಸಲಾಗಿದೆ.

ಈ ಹಿಂದೆ ಹೊರಡಿಸಲಾದ ಆದೇಶ ಸಂಖ್ಯೆ ಕಂಇ 193 ಟಿಎನ್‌ಆರ್ 2020 ದಿನಾಂಕ:13.04.2020ರನ್ನು ಹಿಂಪಡೆಯಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

16/4/2020

(ಕೆ. ಉಮಾಪತಿ)
ಸರ್ಕಾರದ ಜಂಟಿ ಕಾರ್ಯದರ್ಶಿ,
ಕಂದಾಯ ಇಲಾಖೆ (ವಿ.ನಿ. ಮತ್ತು ನೋಂ. & ಮು.)

**ಇವರಿಗೆ**

1) ಮಹಾ ಲೇಖಪಾಲರು (ಎ & ಇ), ಕರ್ನಾಟಕ, ಬೆಂಗಳೂರು,
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು,
3) ಪೊಲೀಸ್ ಮಹಾ ನಿರ್ದೇಶಕರು ಮತ್ತು ಪೊಲೀಸ್ ಮಹಾ ನಿರೀಕ್ಷಕರು, ನೃಪತುಂಗ ರಸ್ತೆ, ಬೆಂಗಳೂರು,
4) ಸರ್ಕಾರದ ಕಾರ್ಯದರ್ಶಿ (ಪಿ.ಸಿ.ಎ.ಎಸ್.), ಒಳಾಡಳಿತ ಇಲಾಖೆ, ವಿಧಾನ ಸೌಧ, ಬೆಂಗಳೂರು,
5) ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು,
6) ಉಪ ನಿರ್ದೇಶಕರು, ಖಜಾನೆ ನೆಟ್‌ವರ್ಕ್ ಮ್ಯಾನೇಜ್ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.

**ಪ್ರತಿ:**

1) ಆಯುಕ್ತರು, ಕರ್ನಾಟಕ ರಾಜ್ಯ ವಿಪತ್ತು ನಿರ್ವಹಣಾ ಪ್ರಾಧಿಕಾರ, ಬಹುಮಹಡಿ ಕಟ್ಟಡ, ಬೆಂಗಳೂರು,
2) ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ), ವಿಧಾನ ಸೌಧ, ಬೆಂಗಳೂರು ಇವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು,
3) ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕಂದಾಯ ಇಲಾಖೆ (ವಿ.ನಿ)ಯವರ ಆಪ್ತ ಕಾರ್ಯದರ್ಶಿ.
4) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.